**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಸಿ.ಎನ್.ಮಂಜೇಗೌಡ, ಹಣಮಂತ ಆರ್.ನಿರಾಣಿ ಹಾಗೂ ಕೇಶವ ಪ್ರಸಾದ್ ಎಸ್ ಇವರುಗಳು ಪ್ರಸ್ತಾಪಿಸಿರುವ ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ:-**

**ಪ್ರಶ್ನೆ:**

ಸರ್ಕಾರಿ ಶಾಲೆಗಳು ಹಾಗೂ ವಸತಿ ಶಾಲೆಗಳಲ್ಲಿ ಮಕ್ಕಳಿಂದ ಮಲದ ಗುಂಡಿ ಸ್ವಚ್ಛತೆ ಮಾಡಿಸುವುದು ಹಾಗೂ ಶೌಚಾಲಯಗಳನ್ನು ಸ್ವಚ್ಛ ಮಾಡಿಸುವಂತಹ ಹೀನ ಪ್ರಕರಣಗಳು ಬೆಳಕಿಗೆ ಬರುತ್ತಿದ್ದು, ಅದರಲ್ಲಿ ಪರಿಶಿಷ್ಟ ಸಮುದಾಯಕ್ಕೆ ಸೇರಿದವರೇ ದೌರ್ಜನ್ಯ, ಶೋಷಣೆಗೆ ಗುರಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ಹೀನ ಕೃತ್ಯಗಳಿಂದ ಏನೂ ಅರಿಯದ ಮುಗ್ಧ ಮನಸ್ಸುಗಳಲ್ಲಿ ಪರಿಣಾಮ ಬೀರುವುದಲ್ಲದೇ, ಜಾತಿ ತಾರತಮ್ಯ, ಮೇಲು-ಕೀಳು ಎಂಬ ಭಾವನೆಗಳು ಮನೆ ಮಾಡುತ್ತವೆ. ಇಂತಹ ಕೃತ್ಯಗಳ ನೈತಿಕ ಹೊಣೆ ಯಾರು ಹೊರಬೇಕು? ಮಕ್ಕಳಿಂದ ಶೌಚಾಲಯಗಳನ್ನು ಸ್ವಚ್ಛ ಮಾಡಿಸುವುದು ಹಾಗೂ ಮಲದ ಗುಂಡಿ ಸ್ವಚ್ಛತೆ ಮಾಡಿಸುವುದನ್ನು ಸಹಿಸಲು ಸಾದ್ಯವಿಲ್ಲ. ಇಂತಹ ಅಕ್ಷಮ್ಯ ಅಪರಾಧಗಳನ್ನು ತಡೆಗಟ್ಟುವಲ್ಲಿ ಹಾಗೂ ಎಸಗುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವ ವಿಷಯದ ಕುರಿತು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಲ್ಲಿ ಈ ವಿಷಯವನ್ನು ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯ ಮತ್ತು ನಿರ್ವಹಣೆಯನ್ನು ಯಾವುದೇ ಕಾರಣಕ್ಕೂ, ಯಾವುದೇ ಸಂದರ್ಭದಲ್ಲಿಯೂ ಸಹ ವಿದ್ಯಾರ್ಥಿಗಳಿಂದ ಕೈಗೊಳ್ಳುವುದನ್ನು ಕಡ್ಡಾಯವಾಗಿ ನಿಷೇಧಿಸಿ ಸುತ್ತೋಲೆ ಸಂಖ್ಯೆ: ಎಡಿಎಂ(2)ಶೌ.ನಿ/01/2023-24, ದಿನಾಂಕ:28.12.2023 ಹೊರಡಿಸಲಾಗಿದೆ.

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ವಾರ್ಷಿಕ ನಿರ್ವಹಣೆಗಾಗಿ ಪ್ರತಿ ವರ್ಷ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಎಸ್.ಡಿ.ಎಂ.ಸಿಯು ಶೌಚಾಲಯ ಶುಚಿ ಸೇರಿದಂತೆ ಶಾಲಾ ನಿರ್ವಹಣೆಗೆ ಸಂಬಂಧಿಸಿದ ಖರ್ಚನ್ನು ನಿಯಮಾನುಸಾರ ಭರಿಸಲು ಆದೇಶಿಸಲಾಗಿದೆ.

ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳಿಗೆ, ಶಾಲೆಗಳ ಮುಖ್ಯಶಿಕ್ಷಕರಿಗೆ ಮಕ್ಕಳಿಂದ ಶೌಚಾಲಯ ನಿರ್ವಹಣೆ ಕಾರ್ಯವನ್ನು ಕೈಗೊಳ್ಳದಂತೆ ಅಗತ್ಯ ನಿರ್ದೇಶನ ನೀಡಲಾಗಿರುತ್ತದೆ. ಒಂದು ವೇಳೆ ಮಕ್ಕಳಿಂದ ಶೌಚಾಲಯ ಸ್ವಚ್ಛತೆ ಕಾರ್ಯನಿರ್ವಹಿಸಿದ್ದಲ್ಲಿ, ಅಂತಹವರ ಮೇಲೆ ಇಲಾಖಾ ನಿಯಮಾನುಸಾರ ಶಿಸ್ತು ಕ್ರಮವನ್ನು ಜರುಗಿಸಲಾಗುವುದರೊಂದಿಗೆ ಎಫ್.ಐ.ಆರ್ ದಾಖಲಿಸಲಾಗುವುದಾಗಿ

ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿರುತ್ತದೆ. ಇಂತಹ ಪ್ರಕರಣ ಗಮನಕ್ಕೆ ಬಂದಲ್ಲಿ ತಕ್ಷಣವೇ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ)ರವರು ಸಂಬಂಧಿಸಿದವರ ಮೇಲೆ ಜರೂರಾಗಿ ಕ್ರಮವಹಿಸುವಂತೆ ಹಾಗೂ ತಪ್ಪಿದಲ್ಲಿ ಅಥವಾ ನಿರ್ಲಕ್ಷ ತೋರಿದಲ್ಲಿ ಮತ್ತು ಇಂತಹ ಪ್ರಕರಣಗಳು ಮರುಕಳಿಸಿದಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು (ಆಡಳಿತ)ರವರನ್ನೇ ನೇರ ಹೊಣೆಗಾರರನ್ನಾಗಿಸಿ ಇಲಾಖೆ ನಿಯಮಾನುಸಾರ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು ಎಂದು ಎಚ್ಚರಿಸಿದೆ.

ಆಯಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳು ವಿದ್ಯಾರ್ಥಿಗಳಿಗೆ ಈ ಕುರಿತು ಅರಿವು ಮೂಡಿಸುವಂತೆ ಹಾಗೂ ಯಾವುದೇ ವಿದ್ಯಾರ್ಥಿಗಳು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದಿಲ್ಲ ಎಂಬುದನ್ನು ಖಚಿತಪಡಿಸುವಂತೆ ಸೂಚಿಸಲಾಗಿರುತ್ತದೆ. ಮುಂದುವರೆದು, ಶಾಲಾ ಉಸ್ತುವಾರಿ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಶಾಲೆಗಳಿಗೆ ಕಾಲಕಾಲಕ್ಕೆ ಖುದ್ದು ಭೇಟಿ ನೀಡಿ, ಈ ಕುರಿತು ಖುದ್ದಾಗಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

**ಇಪಿ 46 ಎಂಪಿಇ 2024**

(ಎಸ್.ಮಧುಬಂಗಾರಪ್ಪ)

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**